# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಹೊ.ಕಾ.-03/PSCM/2024-2025

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ: 22.10.2024.

## ಅಧಿಸೂಚನೆ

**ವಿಷಯ : 2024-25ನೇ ಶೈಕ್ಷಣಿಕ ಸಾಲಿಗೆ ಹೊಸ ಸಂಯೋಜನೆ ನೀಡುವ ಬಗ್ಗೆ.**

**ಉಲ್ಲೇಖ:** 1. ಸರ್ಕಾರದ ಆದೇಶ ಇ-ಕಛೇರಿ ಸಂಖ್ಯೆ:ಇಡಿ/263/ಯುಬಿವಿ/2024, ದಿ: 04.10.2024.
2. ವಿ. ವಿ.ಅಧಿಸೂಚನೆ ಸಂಖ್ಯೆ: ಎಸಿಎ-3:ಸಂ.ನ:2023-24, ದಿನಾಂಕ: 16.05.2024.
3. ಕುಲಪತಿಯವರ ಅನುಮೋದನೆ ದಿನಾಂಕ: 09.10.2024.

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ11ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ, 2024-25ನೇ ಸಾಲಿನಿಂದ **ಎಂ.ಎಸ್.ವಿ. ಎಜುಕೇಷನ್ & ಚಾರಿಟಬಲ್ ಟ್ರಸ್ಟ್** (ರಿ) ವತಿಯಿಂದ ಸ್ಥಾಪಿಸಲು ಉದ್ದೇಶಿಸಿರುವ **ಪಿನಾಕಲ್ ಸ್ಕೂಲ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್,** ಸರ್ವೆ ನಂ.36/3 & 36/6, ಗುಡಿಘಟ್ಟನಹಳ್ಳಿ, ಎಮ್.ಸಿ. ಹಳ್ಳಿ, ಚಿಕ್ಕ ತಿರುಪತಿ, ಸರ್ಜಾಪುರ ರಸ್ತೆ, ಸರ್ಜಾಪುರ ಪಂಚಾಯಿತಿ, ಆನೇಕಲ್ ತಾಲ್ಲೂಕು, ಬೆಂಗಳೂರು-562 125. ಈ ಕಾಲೇಜಿಗೆ ಕೆಳಕಂಡ ಕೋರ್ಸುಗಳೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಲಾಗಿದೆ.

| ಕೋರ್ಸು (Programme) | ವಿಷಯವಾರು ( Subject / Combination) | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 100 (ನೂರು) |

**ಷರತ್ತು ಮತ್ತು ನಿಬಂಧನೆಗಳು:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ ಪ್ರಕರಣ59ರಲ್ಲಿನ ಮಾನದಂಡಗಳನ್ನು ಹಾಗೂ ಸಂಯೋಜನೆಗೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಿರುವ ಆದೇಶ ಮತ್ತು ಸುತ್ತೋಲೆಗಳನ್ನು ಕಾಲೇಜು ಕಡ್ಡಾಯವಾಗಿ ಪಾಲಿಸತಕ್ಕದ್ದು. ಸರ್ಕಾರದ ಆದೇಶ ಸಂಖ್ಯೆ ಇಡಿ 29 ಯುಎನ್‌ಇ 2021 ದಿನಾಂಕ: 12.02.2021ರಲ್ಲಿನ ಷರತ್ತುಗಳನ್ನು ಒಂದು ವರ್ಷದೊಳಗೆ ಪೂರೈಸತಕ್ಕದ್ದು.
2. ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲ ಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯ ನಿರ್ವಹಣೆಯ ಖಚಿತತೆಗಾಗಿ ನಿಗಧಿಪಡಿಸಲಾದ ಸೂಚ್ಯಂಕಗಳ ಪೈಕಿ ಪಾಲನೆಯಾಗದ ಸೂಚ್ಯಂಕಗಳನ್ನು 6 ತಿಂಗಳ ಒಳಗಾಗಿ ಪೂರೈಸತಕ್ಕದ್ದು.
3. ಕಾಲೇಜುಗಳಿಗೆ ಅನ್ವಯವಾಗುವಅನುದಾನ ಸಂಹಿತೆಯಲ್ಲಿಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ; ಅದು ಶಾಶ್ವತ ಅನುದಾನರಹಿತ ಕಾಲೇಜೆಂದು ಪರಿಗಣಿಸತಕ್ಕದ್ದು.

4. ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಡಲು ಕಾಲೇಜು ಸರ್ಕಾರಕ್ಕೆ ಬರೆದುಕೊಟ್ಟಿರುವ ಮಧ್ಯಂತರ ಒಪ್ಪಂದದಲ್ಲಿನ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

5. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು:

6. **ಸರ್ಕಾರವು ನಿರ್ದೇಶಿಸಿರುವಂತೆ ಸಂಯೋಜಿತ ಕೋರ್ಸುಗಳಿಗೆ ಕಡ್ಡಾಯವಾಗಿ ಸರ್ಕಾರದ UUCMS ಪೋರ್ಟಲ್ ಮೂಲಕವೇ ಪ್ರವೇಶಾತಿಯನ್ನು ಮಾಡತಕ್ಕದ್ದು.**

7. ಸದರಿ ಕೋರ್ಸುಗಳಿಗೆ ವಿಶ್ವವಿದ್ಯಾಲಯದ/AICTE(B.C.A./B.B.A.) ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.

8. ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

9. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನುಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇವುಗಳನ್ನು ಪಾಲಿಸಿದ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಕಳುಹಿಸತಕ್ಕದ್ದು.

10. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಭೋಧಕರು ಹಾಗೂ ಭೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

11. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಭೋಧಕರುಗಳನ್ನು ಪ್ರಾಂಶುಪಾಲರು/ ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

12. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

13. ವೈಶಾಕ V/s ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:**13-8-1997**ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ /ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.

14. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವರಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

11 Nov 2024, 09:[illegible]

15. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರಅನುಮತಿಇರುವುದಿಲ್ಲ.

16. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

17. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

18. ***ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.***

19. 2025-26ನೇ ಶೈಕ್ಷಣಿಕ ಸಾಲಿಗೆ ಕೋರ್ಸು/ಗಳ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ತಪ್ಪದೆ ಸಲ್ಲಿಸತಕ್ಕದ್ದು.

20. ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಮುಚ್ಚಳಿಕೆ ಪತ್ರದ ಮಾದರಿಯನ್ನು ರೂ.100/-ಗಳ ಛಾಪಾ ಕಾಗದದಲ್ಲಿ ಬೆರಳಚ್ಚು ಮಾಡಿ, ಕಾಲೇಜಿನ ಅಧ್ಯಕ್ಷರು/ಪ್ರಾಂಶುಪಾಲರಿಂದ ಸಹಿ ಮಾಡಿಸಿ, ವಿಶ್ವವಿದ್ಯಾಲಯಕ್ಕೆ 15 ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು.

21. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆದೇಶದ ಮೇರೆಗೆ

22/10/24

ಕುಲಸಚಿವರು

ಗೆ,

**ಪ್ರಾಂಶುಪಾಲರು,**
**ಪಿನಾಕಲ್ ಸ್ಕೂಲ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್,**
**ಸರ್ವೇ ನಂ.36/3 & 36/6, ಗುಡಿಘಟ್ಟನಹಳ್ಳಿ,**
**ಎಮ್.ಸಿ. ಹಳ್ಳಿ, ಚಿಕ್ಕ ತಿರುಪತಿ, ಸರ್ಜಾಪುರ ರಸ್ತೆ,**
**ಸರ್ಜಾಪುರ ಪಂಚಾಯಿತಿ, ಆನೇಕಲ್ ತಾಲ್ಲೂಕು,**
**ಬೆಂಗಳೂರು-562 125.**

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-560 001.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560 001.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1, ಬೆಂ.ವಿ.ಬೆಂಗಳೂರು-56.
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56.

11 Nov 2024, 09:56